ಇ) ಈಗಾಗಲೇ ಎ ಐ ಸಿ ಟಿ ಇ ನವದೆಹಲಿಯು 5 ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು 2002–03ನೇ ಸಾಲಿನಲ್ಲಿಯೇ ಮಂಜೂರಾತಿ ನೀಡಿದ್ದು, ಆಯವ್ಯಯದ ಕೊರತೆಯಿಂದಾಗಿ ಅವುಗಳನ್ನು ಪ್ರಾರಂಭಿಸಿರುವುದಿಲ್ಲ 2007–08ನೇ ಸಾಲಿನಲ್ಲಿ ಈಗಾಗಲೇ ಎ ಐ ಸಿ ಟಿ ಇ ಯಿಂದ ಮಂಜೂರಾಗಿರುವ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಆಯವ್ಯಯದ ಅವಕಾಶವನ್ನು ಮಾಡಿಕೊಂಡು ನಂತರ ಲಿಂಗಸಗೂರು ತಾಲ್ಲೂಕಿಗೆ ಪಾಲಿಟೆಕ್ನಿಕ್ ಮಂಜೂರು ಮಾಡಲು ಎ ಐ ಸಿ ಟಿ ಇ, ನವದೆಹಲಿಯ ಅನುಮೋದನೆ ಪಡೆದ ನಂತರ ಕ್ರಮ ಕೈಗೊಳ್ಳಲಾಗುವುದು

984 (1099) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) 2006–07ನೇ ಸಾಲಿನಲ್ಲಿ ನವೆಂಬರ್, ಡಿಸೆಂಬರ್ ತಿಂಗಳುಗಳಲ್ಲಿ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಎಷ್ಟು ಗ್ರಾಮಗಳಿಗೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ಹಣ ಖರ್ಚಾಗಿರುತ್ತದೆ,

ಆ) ಬಿಡುಗಡೆಯಾಗಿರುವ ಮೊತ್ತವೆಷ್ಟು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) 2006–07ನೇ ಸಾಲಿನಲ್ಲಿ ನವೆಂಬರ್, ಡಿಸೆಂಬರ್ ತಿಂಗಳುಗಳಲ್ಲಿ ಚಾಮುಂಡೇಶ್ವರಿ ಮತ ಕ್ಷೇತ್ರಕ್ಕೆ 124 ಗ್ರಾಮಗಳಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಕುಡಿಯುವ ನೀರು ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ

ಆ) 2006–07ನೇ ಸಾಲಿನಲ್ಲಿ ನವೆಂಬರ್, ಡಿಸೆಂಬರ್ ತಿಂಗಳುಗಳಲ್ಲಿ ಬಿಡುಗಡೆಯಾದ ಮೊತ್ತ ರೂ 550 00 ಲಕ್ಷಗಳು

985 (1181) ಶ್ರೀ ಆಂಜನೇಯ ಹೆಚ್ (ಭರಮಸಾಗರ) ಮಾನ್ಯ ಶ್ರೀ ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿ ಯಾವಾಗ ಪ್ರಾರಂಭವಾಗುವುದು,

ಆ) ಈ ಯೋಜನೆಗೆ ಮೀಸಲಿಟ್ಟಿರುವ ಹಣ ಎಷ್ಟು,